# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **643** |
| ಸದಸ್ಯರ ಹೆಸರು | : | ಶ್ರೀ ಟಿ.ಎನ್.ಜವರಾಯಿ ಗೌಡ (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 12-12-2025 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೃಷಿ ಕ್ಷೇತ್ರಕ್ಕೂ ಡಿಜಿಟಲ್ ತಂತ್ರಜ್ಞಾನವನ್ನು ಬಳಸಿ ಇಳುವರಿ ಹೆಚ್ಚಿಸುವ ಉದ್ದೇಶದಿಂದ ಕೇಂದ್ರ ಸರ್ಕಾರವು ಆರಂಭಿಸಿರುವ "ಡಿಜಿಟಲ್ ಕೃಷಿ ಮಿಷನ್" ದೇಶದ ಅನೇಕ ರಾಜ್ಯಗಳಲ್ಲಿ ಯಶಸ್ವಿಯಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದಲ್ಲಿ. ಕೃಷಿ ಕ್ಷೇತ್ರದಲ್ಲಿ ಮಹತ್ವ ಪಾತ್ರ ವಹಿಸಿರುವ ರಾಜ್ಯದಲ್ಲಿ ಡಿಜಿಟಲ್ ಕೃಷಿ ಮಿಷನ್ ಯೋಜನೆಯನ್ನು ಆಳವಡಿಸಿಕೊಳ್ಳಲಾಗಿದಯೇ; (ವಿವರ ನೀಡುವುದು); | ರಾಜ್ಯದಲ್ಲಿ ಡಿಜಿಟಲ್ ಮೀಷನ್ ಯೋಜನೆಯನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗಿದೆ. ವಿವರಗಳು ಈ ಕೆಳಕಂಡಂತಿದೆ.<br><br>1) ಜಾಗತಿಕ ಮಟ್ಟದಲ್ಲಿ ಡಿಜಿಟಲ್, ಕೃತಕ ಬುದ್ಧಿಮತ್ತೆ ಹಾಗೂ ಜಿಯೋ ಸ್ಪೇಷಿಯಲ್ ಕ್ಷೇತ್ರದಲ್ಲಿ ಆಗುತ್ತಿರುವ ಆವಿಷ್ಕಾರಗಳನ್ನು ಕೃಷಿ ಕ್ಷೇತ್ರದಲ್ಲಿ ಅಳವಡಿಸಿ, ರೈತರಿಗೆ ಮತ್ತು ನೀತಿ ನಿರೂಪಕರಿಗೆ ಬೆಳೆಗಳ ಕುರಿತು ನಿಖರವಾದ ತೀರ್ಮಾನವನ್ನು ಕೈಗೊಂಡು ಬೆಳೆಗಳಲ್ಲಿ ಉತ್ಪಾದಕತೆಯನ್ನು ಹೆಚ್ಚಿಸಲು ಸಹಕಾರಿಯಾಗಲು ಡಿಜಿಟಲ್ ಕೃಷಿ ಸೇವೆಗಳ ಕೇಂದ್ರವನ್ನು ಸ್ಥಾಪಿಸಲು 2025-26ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-34ರಲ್ಲಿ ಘೋಷಿಸಲಾಗಿರುತ್ತದೆ. ಸದರಿ ಯೋಜನೆಯು ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರ, ಬೆಂಗಳೂರು ಹಾಗೂ ಪ್ರಾದೇಶಿಕ ದೂರ ಸಂವೇದಿ ಕೇಂದ್ರ (ದಕ್ಷಿಣ ಭಾರತ) ಬೆಂಗಳೂರು ರವರ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ.<br><br>2) ರಾಜ್ಯದ ಆಯ್ದ ಜಿಲ್ಲೆಗಳ ಕಬ್ಬಿನ ಬೆಳೆ ಪ್ರದೇಶಗಳಲ್ಲಿ ಉತ್ಪಾದಕತೆ ಹೆಚ್ಚಿಸುವ ನಿಟ್ಟಿನಲ್ಲಿ ಕೃಷಿ ವಿಜ್ಞಾನ ಕೇಂದ್ರ, ಬಾರಾಮತಿ (ಮಹಾರಾಷ್ಟ್ರ) ಇವರು ಅಭಿವೃದ್ಧಿಪಡಿಸಿದ ಸುಧಾರಿತ ಕೃತಕ ಬುದ್ಧಿಮತ್ತೆ |

| | | |
|---|---|---|
| | | ಅನುಷ್ಠಾನ ಮಾದರಿಯಲ್ಲಿ ತಾಂತ್ರಿಕತೆಗಳನ್ನು ಅಳವಡಿಸುವ ಮೂಲಕ ಕ್ಲಸ್ಟರ್ ಮಾದರಿಯ ಪ್ರಾಯೋಗಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಯೋಜನೆಯಡಿ ನೀರಿನ ಸಮರ್ಪಕ ಬಳಕೆ, ರಸಗೊಬ್ಬರ ನಿರ್ವಹಣೆ, ಸಮಗ್ರ ಬೆಳೆ ನಿರ್ವಹಣೆ ವಿಧಾನಗಳ ಅನುಷ್ಠಾನದ ಮೂಲಕ ಕಬ್ಬಿನ ಇಳುವರಿ ಹೆಚ್ಚಿಸುವುದು ಮುಖ್ಯ ಉದ್ದೇಶವಾಗಿದೆ. ಇದಕ್ಕಾಗಿ ಪ್ರತಿ ಜಿಲ್ಲೆಯಲ್ಲಿ 25 ಹೆಕ್ಟೇರ್ ಪ್ರದೇಶವನ್ನು ಆಯ್ಕೆ ಮಾಡುವ ಮೂಲಕ ಅನುಷ್ಠಾನ ಮಾಡಲು ಯೋಜನೆ ರೂಪಿಸಲಾಗಿದೆ.<br><br>3) ಡಿಜಿಟಲ್ ಕೃಷಿ ಮಿಷನ್‌ನ **"Digital Crop Survey"** ಘಟಕದಡಿ ರಾಜ್ಯದ ವಿವಿಧ ಬೆಳೆಗಳ ಸಮೀಕ್ಷೆ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ. ಈ ಸಮೀಕ್ಷೆಯಿಂದ ದೊರಕುವ ಅಂಕಿಅಂಶಗಳು ಅತಿವೃಷ್ಟಿ, ಅನಾವೃಷ್ಟಿ, ಕೀಟಬಾಧೆ ಇತ್ಯಾದಿ ಪ್ರಕೃತಿ ವೈಪರೀತ್ಯಗಳ ಸಂದರ್ಭಗಳಲ್ಲಿ ಪರಿಹಾರ ವಿತರಣೆ, ಬೆಂಬಲ ಬೆಲೆ ಯೋಜನೆಗಳ ಅನುಷ್ಠಾನ ಹಾಗೂ ಡಿಜಿಟಲ್ ಕೃಷಿ ಮೂಲಸೌಕರ್ಯ (DPI) ವಿಕಸನಕ್ಕೆ ಆಧಾರ ಮಾಹಿತಿಯಾಗಿ ಬಳಕೆಯಾಗಲಿವೆ. |
| ಇ) | ಈ ಯೋಜನೆಯನ್ನು ಆಳವಡಿಸಿಕೊಳ್ಳದಿದ್ದಲ್ಲಿ. ರೈತರಿಗೆ ರೈತರ ಜೀವನದಲ್ಲಿ ಬದಲಾವಣೆ ತರಲು ಸದರಿ ಯೋಜನೆಯನ್ನು ಆಳವಡಿಸಿಕೊಳ್ಳಲು ಸರ್ಕಾರ ಇದುವರೆಗೂ ತೆಗೆದುಕೊಂಡ ಕ್ರಮಗಳೇನು? (ವಿವರಣೆ ನೀಡುವುದು); | ಉದ್ಭವಿಸುವುದಿಲ್ಲ. |

*ಕೃ ಇ 222 ಎಎಂಎಸ್ 2025*

**(ಎನ್. ಚಲುವರಾಯಸ್ವಾಮಿ)**
ಕೃಷಿ ಸಚಿವರು